# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 661 |
| ಸದಸ್ಯರ ಹೆಸರು | : | ಡಾ: ಎಂ.ಜಿ. ಮುಳೆ,<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 21.08.2026 |
| ಉತ್ತರಿಸುವ ಸಚಿವರು | : | ಮಾನ್ಯ ಜಲಸಂಪನ್ಮೂಲ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಜಿಲ್ಲೆಯ ಕಾರಂಜಾ ನೀರಾವರಿ ಯೋಜನೆಯಿಂದ ಜಮೀನು ಕಳೆದುಕೊಂಡ ಸಂತ್ರಸ್ತ ರೈತರಿಗೆ ಸಮ್ಮತಿ ಪರಿಹಾರ (Consent Compensation) ನೀಡುವ ಕುರಿತು ಸರ್ಕಾರದ ಹಂತದಲ್ಲಾಗಿರುವ ತೀರ್ಮಾನವೇನು; | ಕಾರಂಜಾ ಯೋಜನೆಯಡಿ ಭೂಸ್ವಾಧೀನಪಡಿಸಿಕೊಂಡ ಜಮೀನುಗಳಿಗೆ ಭೂಸ್ವಾಧೀನ ಕಾಯ್ದೆಯಂತೆ ಇತರೆ ಶಾಸನಬದ್ಧ ಸೌಲಭ್ಯಗಳನ್ನು ಸೇರಿಸಿ ಸಂಪೂರ್ಣ ಪರಿಹಾರ ಧನವನ್ನು ಪಾವತಿಸಲಾಗಿದೆ. ಮುಂದುವರೆದು, ಹೆಚ್ಚುವರಿ ಪರಿಹಾರ ಕೋರಿ ಮಾನ್ಯ ನ್ಯಾಯಾಲಯದ ಮೊರೆಹೋದ ಭೂಮಾಲೀಕರಿಗೆ ಹೆಚ್ಚುವರಿ ಪರಿಹಾರವನ್ನು ಸಹ ವಿತರಿಸಲಾಗಿರುತ್ತದೆ.<br><br>ಹೆಚ್ಚುವರಿ ಪರಿಹಾರ ಧನಕ್ಕಾಗಿ ಮಾನ್ಯ ಸಿವಿಲ್ ನ್ಯಾಯಾಲಯದಲ್ಲಿ ಭೂಸ್ವಾಧೀನ ಕಾಯ್ದೆ 1864 ಕಲಂ 18 (1) ಹಾಗೂ 28 (ಎ) ಅರ್ಜಿಗಳನ್ನು ಸಲ್ಲಿಸದಿರುವ ಭೂಮಾಲೀಕರಿಗೂ ಕೂಡ ಪರಿಹಾರಧನ ನೀಡುವಂತೆ ಭೂಮಾಲೀಕರು ಹೋರಾಟ ಮಾಡುತ್ತಿದ್ದು, ಭೂಸ್ವಾಧೀನ ಕಾಯ್ದೆ 1864ರ ಅಡಿಯಲ್ಲಿ ಹೆಚ್ಚುವರಿ ಪರಿಹಾರಧನ ನೀಡಲು ಕಾನೂನಿನಲ್ಲಿ ಅವಕಾಶ ಇರುವುದಿಲ್ಲ.<br><br>ದಿನಾಂಕ:19.12.2024 ರಂದು ಅಂದಿನ ಮಾನ್ಯ ಮುಖ್ಯಮಂತ್ರಿಯವರು ಬೆಳಗಾವಿಯ ಸುವರ್ಣ ಸೌಧದಲ್ಲಿ ಕಾರಂಜಾ ಜಲಾಶಯ ಯೋಜನೆಯ ಮುಳುಗಡೆ ಪ್ರದೇಶದ ಸಂತ್ರಸ್ಥರ ಸಮಸ್ಯೆಗಳ ಬಗ್ಗೆ ಚರ್ಚಿಸಲು ನಡೆದ ಸಭೆಯಲ್ಲಿ ಸೂಚಿಸಿರುವಂತೆ, ದಿನಾಂಕ:07.04.2025ರಂದು ಪ್ರಾದೇಶಿಕ ಆಯುಕ್ತರು, ಕಲಬುರಗಿ ರವರ ಅಧ್ಯಕ್ಷತೆಯಲ್ಲಿ ಅಧಿಕಾರಿಗಳ ಸಮಿತಿಯನ್ನು ರಚಿಸಲಾಗಿತ್ತು. ಸದರಿ ಸಮಿತಿಯು ದಿನಾಂಕ:13.11.2025ರಂದು ವರದಿ ನೀಡಿದ್ದು, ಸರ್ಕಾರದ ಪರಿಶೀಲನೆಯಲ್ಲಿದೆ. |
| ಆ) | ಈ ಯೋಜನೆಗಾಗಿ ಜಮೀನು ಸ್ವಾಧೀನಪಡಿಸಿಕೊಂಡು ದಶಕಗಳೇ ಕಳೆದಿದ್ದರೂ, ಸಂತಸ್ತ ರೈತರು ನ್ಯಾಯಯುತ ಪರಿಹಾರಕ್ಕಾಗಿ ಸತತ ಪ್ರತಿಭಟನೆಗಳನ್ನು ನಡೆಸುತ್ತಿರುವು ಸರ್ಕಾರದ ಗಮನಕ್ಕೆ ಬಂದಿದೆಯೇ; | |
| ಇ) | ಸಂತ್ರಸ್ತ ಕುಟುಂಬಗಳಿಗೆ 'ಒನ್-ಟೈಮ್ ಪರಿಹಾರ' (One-Time Settlement) ಹಾಗೂ ಅವರ ಮಕ್ಕಳಿಗೆ ಪುನರ್ವಸತಿ/ ಉದ್ಯೋಗ ಕಲ್ಪಿಸುವ ಕುರಿತು ಸಚಿವ ಸಂಪುಟ ಅಥವಾ ಸರ್ಕಾರ ರೂಪಿಸಿರುವ ನಿರ್ದಿಷ್ಟ ಯೋಜನೆಯೇನು; | |
| ಈ) | ಈ ಯೋಜನೆಗೆ ಸಂಬಂಧಿಸಿದಂತೆ ರೈತರಿಗೆ ನೀಡಬೇಕಾದ ಪರಿಹಾರದ ಬಾಕಿ ಮೊತ್ತವೆಷ್ಟು ಮತ್ತು ಇದನ್ನು ಯಾವ ಕಾಲಮಿತಿಯಲ್ಲಿ ವಿತರಿಸಲಾಗುವುದು? | |

ಜಸಂಇ 99 ಎಂಎಲ್ ಎ 2026

(ಎನ್. ಚಲುವರಾಯಸ್ವಾಮಿ)
ಜಲಸಂಪನ್ಮೂಲ ಸಚಿವರು